**All India Radio: Bangalore**
**National Bulletin In Kannada**
**13.09.2026 7.35 AM**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<>><><*><><<>**

ಮುಖ್ಯಾಂಶಗಳು

**೧. ಬ್ರಿಕ್ಸ್ ಶೃಂಗಸಭೆ; ಅಂತಿಮ ದಿನವಾದ ಇಂದು ಮುಖ್ಯ ಅಧಿವೇಶನದಲ್ಲಿ ಬ್ರಿಕ್ಸ್ ರಾಷ್ಟ್ರಗಳ ಪ್ರತಿನಿಧಿಗಳು ಭಾಗಿ**

**೨. ಬ್ರಿಕ್ಸ್ ಪಾಲುದರ ರಾಷ್ಟ್ರಗಳ ನಾಯಕರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ**

**೩. ಎಲೆನಾ ರೈಬಕಿನಾ ಮುಡಿಗೆ ಯುಎಸ್ ಓಪನ್ ಟೆನಿಸ್ ಮಹಿಳಾ ಸಿಂಗಲ್ಸ್ ಪ್ರಶಸ್ತಿ ಗರಿ**

**೪. ಮಹಿಳಾ ಟಿ-೨೦ ಏಷ್ಯಾ ಕಪ್ ಕ್ರಿಕೆಟ್; ಫೈನಲ್ ಪಂದ್ಯದಲ್ಲಿ ಇಂದು ಭಾರತ-ಶ್ರೀಲಂಕಾ ಮುಖಾಮುಖಿ**

**<>><><*><><<>**

ಇಂದು ಬ್ರಿಕ್ಸ್ ಶೃಂಗಸಭೆಯ ಎರಡನೇ ಹಾಗೂ ಅಂತಿಮ ದಿನವಾಗಿದೆ. ನವದೆಹಲಿಯ ಭಾರತ ಮಂಟಪದಲ್ಲಿ ನಿನ್ನೆ ಎರಡು ದಿನಗಳ ಶೃಂಗಸಭೆ ಆರಂಭಗೊಂಡಿತು. ಶೃಂಗಸಭೆಯ ಮೊದಲ ದಿನವೇ ಬ್ರಿಕ್ಸ್ ರಾಷ್ಟ್ರಗಳು 'ನವದೆಹಲಿ ಘೋಷಣೆ ೨೦೨೬' ಅನ್ನು ಅಂಗೀಕರಿಸಿವೆ. ಸಂವಾದ, ಸಮಾಲೋಚನೆ ಮತ್ತು ರಾಜತಾಂತ್ರಿಕತೆಯ ಮೂಲಕ ಅಂತಾರಾಷ್ಟ್ರೀಯ ವಿವಾದಗಳನ್ನು ಶಾಂತಿಯುತವಾಗಿ ಬಗೆಹರಿಸುವ ತಮ್ಮ ಬದ್ಧತೆಯನ್ನು ಬ್ರಿಕ್ಸ್ ರಾಷ್ಟ್ರಗಳು ಪುನರುಚ್ಚರಿಸಿವೆ. ಪಶ್ಚಿಮ ಏಷ್ಯಾದಲ್ಲಿ ಉಲ್ಬಣಗೊಳ್ಳುತ್ತಿರುವ ಉದ್ವಿಗ್ನತೆಯ ಬಗ್ಗೆ ನಾಯಕರು ಕಳವಳ ವ್ಯಕ್ತಪಡಿಸಿದರು. ಅಲ್ಲದೇ, ಸಂಯಮವನ್ನು ಪಾಲಿಸುವಂತೆ ಮತ್ತು ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸಬಲ್ಲ ಕ್ರಮಗಳನ್ನು ತಪ್ಪಿಸುವಂತೆ ಅವರು ಕರೆ ನೀಡಿದರು. ಕಳೆದ ವರ್ಷದ ಏಪ್ರಿಲ್ ೨೨ ರಂದು ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಅವರು ತೀವ್ರವಾಗಿ ಖಂಡಿಸಿದರು. ಭಯೋತ್ಪಾದನೆಯನ್ನು ಅದರ ಎಲ್ಲಾ ರೂಪಗಳು ಹಾಗೂ ಆಯಾಮಗಳಲ್ಲಿ ಎದುರಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಭಾರತ, ನಾಲ್ಕನೇ ಬಾರಿಗೆ ಈ ಶೃಂಗಸಭೆಯನ್ನು ಆಯೋಜಿಸಿದೆ. 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ:

ಅಂತರ್ಗತ ಜಾಗತಿಕ ಬೆಳವಣಿಗೆಗಾಗಿ ಭವಿಷ್ಯವನ್ನು ರೂಪಿಸುವುದು' ಎಂಬ ವಿಷಯದ ಕುರಿತಾದ ಅಧಿವೇಶನದಲ್ಲಿ ಇಂದು ಬ್ರಿಕ್ಸ್ ಸದಸ್ಯ ಮತ್ತು ಪಾಲುದಾರ ರಾಷ್ಟ್ರಗಳು ಭಾಗವಹಿಸಲಿವೆ. ಬೆಲಾರಸ್, ಬೊಲಿವಿಯಾ, ಕಝಾಕಿಸ್ತಾನ್, ಕ್ಯೂಬಾ, ಮಲೇಷ್ಯಾ, ನೈಜೀರಿಯಾ, ಥೈಲ್ಯಾಂಡ್, ಉಗಾಂಡಾ, ಉಜ್ಬೇಕಿಸ್ತಾನ್ ಮತ್ತು ವಿಯೆಟ್ನಾಂ - ಬ್ರಿಕ್ಸ್ ಪಾಲುದಾರ ದೇಶಗಳಾಗಿವೆ. ಅಧಿವೇಶನ ಮುಕ್ತಾಯಗೊಂಡ ನಂತರ, ಪ್ರಧಾನಿ ನರೇಂದ್ರ ಮೋದಿ ಅವರು ಕಝಾಕಿಸ್ತಾನ್, ಫಿಲಿಪೈನ್ಸ್, ಈಜಿಪ್ಟ್, ದಕ್ಷಿಣ ಆಫ್ರಿಕಾ ಮತ್ತು ಬುರುಂಡಿಯ ಅಧ್ಯಕ್ಷರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಅವರು ನೈಜೀರಿಯಾ ಮತ್ತು ಉಗಾಂಡಾದ ಉಪಾಧ್ಯಕ್ಷರೊಂದಿಗೂ ಸಭೆಗಳನ್ನು ನಡೆಸಲಿದ್ದಾರೆ. 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ' ಎಂಬ ಧ್ಯೇಯವಾಕ್ಯದೊಂದಿಗೆ, ಭಾರತದ ಬ್ರಿಕ್ಸ್ ಅಧ್ಯಕ್ಷತೆಯಲ್ಲಿ ಈ ಶೃಂಗಸಭೆ ನಡೆಯುತ್ತಿದೆ.

<>><><*><><<>

ನವದೆಹಲಿಯ ಭಾರತ್ ಮಂಟಪದಲ್ಲಿ ನಿನ್ನೆ ಸಂಜೆ ಪ್ರಧಾನಿ ನರೇಂದ್ರ ಮೋದಿ ಅವರು ಆಯೋಜಿಸಿದ್ದ ಬ್ರಿಕ್ಸ್ ನಾಯಕರ ಶೃಂಗಸಭೆಯ ಔತಣಕೂಟದ ಸಂದರ್ಭದಲ್ಲಿ, 'ನವರಸ' ಎಂಬ ವಿಶೇಷ ಸಾಂಸ್ಕೃತಿಕ ಪ್ರದರ್ಶನವನ್ನು ಪ್ರಸ್ತುತಪಡಿಸಲಾಯಿತು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ 'ಬ್ರಿಕ್ಸ್ ಸಿಂಫನಿ - ಒಂದು ಲಯ, ಹಲವು ಸಂಸ್ಕೃತಿಗಳು' ಎಂಬ ಪರಿಕಲ್ಪನೆಯೊಂದಿಗೆ ಬ್ರಿಕ್ಸ್ ಸದಸ್ಯರು ಮತ್ತು ಪಾಲುದಾರ ರಾಷ್ಟ್ರಗಳ ಸಂಗೀತಗಾರರನ್ನು ಒಂದು ವಿಶಿಷ್ಟ ಸಂಗೀತ ಪ್ರದರ್ಶನದಲ್ಲಿ ಒಟ್ಟುಗೂಡಿಸಿತು. ವೈವಿಧ್ಯಮಯ ಸಂಗೀತ ಸಂಪ್ರದಾಯಗಳನ್ನು ಆಧರಿಸಿ, ಸಿಂಫನಿ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ವೈವಿಧ್ಯತೆ, ಸಾಂಸ್ಕೃತಿಕ ಶ್ರೀಮಂತಿಕೆ ಮತ್ತು ಒಗ್ಗಟ್ಟಿನ ಚೈತನ್ಯವನ್ನು ಪ್ರತಿಬಿಂಬಿಸುವ ಹಂಚಿಕೆಯ ಕಲಾತ್ಮಕ ಅಭಿವ್ಯಕ್ತಿಯನ್ನು ಸೃಷ್ಟಿಸಿತು. ಈ ವೇಳೆ ಬ್ರಿಕ್ಸ್ ದೇಶಗಳ ವಿಭಿನ್ನ ವಾದ್ಯಗಳನ್ನು ಪ್ರದರ್ಶಿಸಲಾಯಿತು. ಸಾಂಸ್ಕೃತಿಕ ವಿನಿಮಯದ ಮೂಲಕ ಒಟ್ಟಾಗಿ ಉತ್ತಮ ಜಗತ್ತನ್ನು ನಿರ್ಮಿಸುವ ಮನೋಭಾವವನ್ನು ಈ ಸಂಗೀತ ಕಾರ್ಯಕ್ರಮವು ಸಾಕಾರಗೊಳಿಸಿತು. ಬ್ರಿಕ್ಸ್ ಸಿಂಫನಿ- ಭಾರತದ ಸಾಂಸ್ಕೃತಿಕ ವೈವಿಧ್ಯತೆಯ ಜೊತೆಗೆ ಬ್ರಿಕ್ಸ್‌ನ ಶ್ರೀಮಂತ ಸಂಸ್ಕೃತಿಗಳು ಮತ್ತು ವೈವಿಧ್ಯಮಯ ನಾಗರಿಕತೆಗಳನ್ನು ಪ್ರದರ್ಶಿಸಿತು.

<>><><*><><<>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮುಂಬೈ ಭೇಟಿಯಲ್ಲಿದ್ದಾರೆ. ಭೇಟಿಯ ಸಂದರ್ಭದಲ್ಲಿ ಅವರು 'ಏಷಿಯಾಟಿಕ್ ಸೊಸೈಟಿ ಆಫ್ ಮುಂಬೈ'ಗೆ ಭೇಟಿ ನೀಡಲಿದ್ದಾರೆ ಮತ್ತು ಹಿಂದಿ ಭಾಷೆಯ

ಕುರಿತಾದ 'ಆರನೇ ಅಖಿಲ ಭಾರತೀಯ ರಾಜಭಾಷಾ ಸಮ್ಮೇಳನ'ದಲ್ಲಿ ಭಾಗವಹಿಸಲಿದ್ದಾರೆ. ಏಷಿಯಾಟಿಕ್ ಸೊಸೈಟಿ ಆಫ್ ಮುಂಬೈನಲ್ಲಿ, ಸಚಿವರು, "ಶ್ರೀ ಗಣೇಶ ಜ್ಞಾನಾರತಿ" ಎಂಬ ಶೀರ್ಷಿಕೆಯಡಿ ವಿಶೇಷವಾಗಿ ಆಯೋಜಿಸಲಾದ ಹಸ್ತಪ್ರತಿಗಳ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಅಲ್ಲದೆ, ಅವರು ಗ್ರಂಥಾಲಯಕ್ಕೆ ಭೇಟಿ ನೀಡಿ, ಏಷಿಯಾಟಿಕ್ ಸೊಸೈಟಿಯ ಹಸ್ತಪ್ರತಿ ಸಂರಕ್ಷಣಾ ಪ್ರಯೋಗಾಲಯದ ಕಾರ್ಯವೈಖರಿಯನ್ನು ಪರಿಶೀಲಿಸಲಿದ್ದಾರೆ ಹಾಗೂ ಸಭೆ ಉದ್ದೇಶಿಸಿ ಮಾತನಾಡಲಿದ್ದಾರೆ. ಸಚಿವ ಅಮಿತ್ ಶಾ ಅವರು, ಮುಂಬೈನ 'ಭಾರತ ಡೈಮಂಡ್ ಬೋರ್ಸ್'ನಲ್ಲಿ ನಡೆಯಲಿರುವ ಜಿಜೆಇಪಿಸಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಾಳೆ, ಸಚಿವರು, ನವಿ ಮುಂಬೈನ ವಾಶಿಯಲ್ಲಿರುವ ಸಿಡ್ಕೊ ಪ್ರದರ್ಶನ ಕೇಂದ್ರದಲ್ಲಿ ನಡೆಯಲಿರುವ 'ರಾಜಭಾಷಾ ಸಮ್ಮೇಳನ'ದಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಮುಂಬೈನ ಪ್ರಸಿದ್ಧ ಗಣಪತಿ ಪೆಂಡಾಲ್ 'ಲಾಲ್‌ಬಾಗ್ ಚ ರಾಜಾ'ಗೆ ಭೇಟಿ ನೀಡಿ, ಗಣೇಶನ ದರ್ಶನ ಪಡೆಯಲಿದ್ದಾರೆ.

**<><><*><><>**

ನೇಪಾಳದಲ್ಲಿ ಸಂಭವಿಸಿದ ಹಠಾತ್ ಪ್ರವಾಹದಿಂದಾಗಿ ಮೃತಪಟ್ಟವರ ಸಂಖ್ಯೆ ಒಂದು ಸಾವಿರದ ೩೮೬ಕ್ಕೆ ಏರಿಕೆಯಾಗಿದೆ. ಪೀಡಿತ ಎಂಟು ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಮೃತದೇಹಗಳನ್ನು ಹೊರತೆಗೆಯಲಾಗಿದೆ. ಕಳೆದ ತಿಂಗಳ ೨೬ ರಂದು ನೇಪಾಳ-ಟಿಬೆಟ್ ಗಡಿಯ ಸಮೀಪ ಹಿಮ ಮತ್ತು ಬಂಡೆಗಳ ಕುಸಿತದಿಂದ ಸಂಭವಿಸಿದ ಈ ಪ್ರವಾಹವು, ಉತ್ತರ ಮತ್ತು ಮಧ್ಯ ನೇಪಾಳದ ಪಟ್ಟಣಗಳು ಹಾಗೂ ಹಳ್ಳಿಗಳನ್ನು ತೀವ್ರವಾಗಿ ಹಾನಿಗೊಳಿಸಿದೆ. ನೇಪಾಳದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಕಾರ, ಇಲ್ಲಿಯವರೆಗೆ ಪತ್ತೆಯಾದ ಮೃತದೇಹಗಳ ಪೈಕಿ ೧೦೪ ಮೃತದೇಹಗಳನ್ನು ಗುರುತಿಸಿ, ಸಂಬಂಧಪಟ್ಟ ಕುಟುಂಬಗಳಿಗೆ ಹಸ್ತಾಂತರಿಸಲಾಗಿದೆ. ಸುಮಾರು ಐದು ಸಾವಿರದ ೧೩೦ ಜನರು ಇನ್ನೂ ನಾಪತ್ತೆಯಾಗಿದ್ದಾರೆ. ಭದ್ರತಾ ಪಡೆಗಳು ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯನ್ನು ಮುಂದುವರಿಸಿವೆ. ಇಲ್ಲಿಯವರೆಗೆ ೧೩ ಸಾವಿರದ ೭೦೦ಕ್ಕೂ ಹೆಚ್ಚು ಜನರನ್ನು ರಕ್ಷಿಸಲಾಗಿದ್ದು, ೩೩೯ ಮಂದಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇದೇ ವೇಳೆ ರಾಸುವಾ, ನುವಾಕೋಟ್ ಮತ್ತು ಧಾಡಿಂಗ್ ಜಿಲ್ಲೆಗಳಲ್ಲಿ ಮೂರು ಸಾವಿರದ ೭೦೦ಕ್ಕೂ ಹೆಚ್ಚು ಜನರು ತಾತ್ಕಾಲಿಕ ಆಶ್ರಯ ತಾಣಗಳಲ್ಲಿ ನೆಲೆಸಿದ್ದಾರೆ.

**<><><*><><>**

ಅಮೆರಿಕದ ನ್ಯೂಯಾರ್ಕ್‌ನ ಆರ್ಥರ್ ಆಶ್ ಸ್ಟೇಡಿಯಂನಲ್ಲಿ ನಿನ್ನೆ ರಾತ್ರಿ ನಡೆದ ಯುಎಸ್ ಓಪನ್ ಟೆನಿಸ್ ಪಂದ್ಯಾವಳಿಯ ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಎಲೆನಾ ರೈಬಕಿನಾ ಅವರು ಅರಿನಾ ಸಬಲೆಂಕಾ ಅವರನ್ನು ಸೋಲಿಸಿ ಪ್ರಶಸ್ತಿ ವಿಜೇತರಾಗಿದ್ದಾರೆ. ಅವರು ಸಬಲೆಂಕಾ

ಅವರನ್ನು ೬-೪, ೫-೭, ೬-೨ ಸೆಟ್‌ಗಳಿಂದ ಪರಾಭವಗೊಳಿಸಿದರು. ಇದು ಎಲೆನಾ ರೈಬಕಿನಾ ಅವರ ಮೊದಲ ಯುಎಸ್ ಓಪನ್ ಪ್ರಶಸ್ತಿಯಾಗಿದೆ. ಈ ವರ್ಷದ ಆರಂಭದಲ್ಲಿ ಆಸ್ಟ್ರೇಲಿಯನ್ ಓಪನ್ ಗೆದ್ದ ನಂತರ ಅವರ ವೃತ್ತಿಜೀವನದ ಮೂರನೇ ಗ್ರ್ಯಾಂಡ್ ಸ್ಲ್ಯಾಮ್ ಚಾಂಪಿಯನ್‌ಶಿಪ್ ಇದಾಗಿದೆ. ಈ ಗೆಲುವಿನೊಂದಿಗೆ, ರೈಬಕಿನಾ ವಿಶ್ವದ ನಂ.೧ ಶ್ರೇಯಾಂಕ ಪಡೆದಿದ್ದಾರೆ. ಪುರುಷರ ಡಬಲ್ಸ್ ವಿಭಾಗದಲ್ಲಿ ಅಮೆರಿಕದ ಕ್ರಿಶ್ಚಿಯನ್ ಹ್ಯಾರಿಸನ್ ಮತ್ತು ಬ್ರಿಟನ್‌ನ ನೀಲ್ ಸ್ಕುಪ್ಸ್ಕಿ ಜೋಡಿ, ಜರ್ಮನಿಯ ಕೆವಿನ್ ಕ್ರಾವಿಯೆಟ್ಜ್ ಮತ್ತು ಟಿಮ್ ಪುಟ್ಜ್ ಜೋಡಿಯನ್ನು ಸೋಲಿಸಿ ಪ್ರಶಸ್ತಿ ಗೆದ್ದಿದ್ದಾರೆ.

ಪುರುಷರ ಸಿಂಗಲ್ಸ್ ಫೈನಲ್ ಪಂದ್ಯ ನ್ಯೂಯಾರ್ಕ್‌ನಲ್ಲಿ ಇಂದು ರಾತ್ರಿ ನಡೆಯಲಿದ್ದು, ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ಮತ್ತು ಅಮೆರಿಕದ ಬೆನ್ ಶೆಲ್ಟನ್ ಮುಖಾಮುಖಿಯಾಗಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೧:೩೦ಕ್ಕೆ ಆರಂಭವಾಗಲಿದೆ.

<>><><*><><<>

ದುಬೈನಲ್ಲಿ ಇಂದು ನಡೆಯಲಿರುವ ಮಹಿಳಾ ಟಿ-೨೦ ಏಷ್ಯಾ ಕಪ್ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ, ಭಾರತ ತಂಡ, ಹಾಲಿ ಚಾಂಪಿಯನ್ ಶ್ರೀಲಂಕಾ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಏಳು ಬಾರಿ ಚಾಂಪಿಯನ್ ಆಗಿರುವ ಭಾರತ ತಂಡ, 'ಎ' ಗುಂಪಿನಲ್ಲಿ ಮೂರು ಪಂದ್ಯಗಳ ಗೆಲುವುಗಳೊಂದಿಗೆ ಅಗ್ರಸ್ಥಾನ ಪಡೆದು ಹಾಗೂ ಸೆಮಿಫೈನಲ್‌ನಲ್ಲಿ ಬಾಂಗ್ಲಾದೇಶವನ್ನು ೪೦ ರನ್‌ಗಳಿಂದ ಸೋಲಿಸುವ ಮೂಲಕ ಅಜೇಯವಾಗಿ ಫೈನಲ್ ತಲುಪಿದೆ. ಶ್ರೀಲಂಕಾ ಕೂಡ ತಮ್ಮ ಗುಂಪಿನ ಮೂರೂ ಪಂದ್ಯಗಳನ್ನು ಗೆದ್ದು, ನಂತರ ಸೆಮಿಫೈನಲ್‌ನಲ್ಲಿ ಪಾಕಿಸ್ತಾನವನ್ನು ನಾಲ್ಕು ವಿಕೆಟ್‌ಗಳಿಂದ ಸೋಲಿಸುವ ಮೂಲಕ ಫೈನಲ್‌ನಲ್ಲಿ ಸ್ಥಾನ ಖಚಿತಪಡಿಸಿಕೊಂಡಿದೆ.

<>><><*><><<>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಇಂದು ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಮೂರು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಪುರುಷರ ಕ್ರಿಕೆಟ್ ಸರಣಿಯ ಮೊಲದ ಪಂದ್ಯ ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಪ್ರಾರಂಭವಾಗಲಿದೆ. ಎರಡನೇ ಟಿ-೨೦ ಪಂದ್ಯ ಮಂಗಳವಾರ ನಡೆಯಲಿದ್ದು, ನಂತರ ಗುರುವಾರ ಮೂರನೇ ಹಾಗೂ ಅಂತಿಮ ಪಂದ್ಯ ನಡೆಯಲಿದೆ. ಈ ಮೂರೂ ಪಂದ್ಯಗಳು ಒಂದೇ ಸ್ಥಳದಲ್ಲಿ ಮತ್ತು ಒಂದೇ ಸಮಯದಲ್ಲಿ ನಡೆಯಲಿವೆ.